# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 819 |
| ಮಾನ್ಯ ಸದಸ್ಯರ ಹೆಸರು | ಶ್ರೀ ಆರ್ ರಘು<br>(ವಿಧಾನಸಭಾ ಕ್ಷೇತ್ರದಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 24.08.2026 |
| ಉತ್ತರಿಸುವ ಸಚಿವರು | ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಅತಿ ಹಿಂದುಳಿದ ಸಮುದಾಯದ ಅಥವಾ ಕುಲಕಸುಬು ಆಧಾರಿತ ವಿದ್ಯಾರ್ಥಿಗಳಿಗೆ ಹೆಚ್ಚುವರಿ ಹಾಸ್ಟೆಲ್‌ಗಳನ್ನು ನಿರ್ಮಿಸುವ ಯೋಜನೆ ಸರ್ಕಾರದ ಮುಂದಿದೆಯೇ; (ಸಂಪೂರ್ಣ ಮಾಹಿತಿ ನೀಡುವುದು) | ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವತಿಯಿಂದ 2712 ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳನ್ನು ನಿರ್ವಹಿಸಲಾಗುತ್ತಿದೆ. ಸದರಿ ನಿಲಯಗಳಲ್ಲಿ 258691 ವಿದ್ಯಾರ್ಥಿಗಳಿಗೆ ಪ್ರವೇಶ ಅವಕಾಶವನ್ನು ಕಲ್ಪಿಸಲಾಗಿದೆ.<br><br>ಇಲಾಖೆಯ ವತಿಯಿಂದ ನಿರ್ವಹಿಸ ಲಾಗುತ್ತಿರುವ ವಿದ್ಯಾರ್ಥಿ ನಿಲಯಗಳಲ್ಲಿ ಎಲ್ಲಾ ಜನಾಂಗದ ವಿದ್ಯಾರ್ಥಿಗಳಿಗೆ ಪ್ರವೇಶಾತಿ ಕಲ್ಪಿಸಲಾಗುತ್ತಿದ್ದು, ಸಮುದಾಯ ಆಧಾರಿತ ವಿದ್ಯಾರ್ಥಿ ನಿಲಯಗಳನ್ನು ನಿರ್ವಹಿಸುತ್ತಿರುವುದಿಲ್ಲ.<br><br>ಮುಂದುವರೆದು ಇಲಾಖೆಯಡಿ ಅಲೆಮಾರಿ/ಅರೆ ಅಲೆಮಾರಿ ಸಮುದಾಯದವರು ಹೆಚ್ಚು ವಾಸಿಸುತ್ತಿರುವ ಜಿಲ್ಲೆಗಳಾದ ಚಿತ್ರದುರ್ಗ ಜಿಲ್ಲೆಯಲ್ಲಿ 3 ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳು ಹಾಗೂ ಬಳ್ಳಾರಿ, ಚಿಕ್ಕಮಗಳೂರು, ದಾವಣಗೆರೆ, ತುಮಕೂರು, ಕಲಬುರಗಿ, ಹಾವೇರಿ, ಯಾದಗಿರಿ, ಬೀದರ ಜಿಲ್ಲೆಗಳಲ್ಲಿ ತಲಾ ಒಂದು ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳು ಹೀಗೆ ಒಟ್ಟು 11 ವಿದ್ಯಾರ್ಥಿನಿಲಯಗಳನ್ನು ನಿರ್ವಹಿಸಲಾಗುತ್ತಿದೆ. ಕುಲಕಸುಬು ಆಧಾರಿತ ವಿದ್ಯಾರ್ಥಿಗಳಿಗೆ ಹೆಚ್ಚುವರಿ ಹಾಸ್ಟೆಲ್‌ಗಳನ್ನು ನಿರ್ಮಿಸುವ ಯೋಜನೆ ಇರುವುದಿಲ್ಲ. |

| | | |
|---|---|---|
| ಆ) | ಸದರಿ ಹಿಂದುಳಿದ ಸಮುದಾಯದ ಅಥವಾ ಕುಲಕಸುಬು ಆಧಾರಿತ ವಿದ್ಯಾರ್ಥಿಗಳಿಗೆ ಹೆಚ್ಚುವರಿ ಹಾಸ್ಟೆಲ್‌ಗಳನ್ನು ನಿರ್ಮಿಸುವ ಯೋಜನೆ ಅನುದಾನ ಬಿಡುಗಡೆ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; | ಉದ್ಭವಿಸುವುದಿಲ್ಲ. |
| ಇ) | ಸರ್ಕಾರ ಸದರಿ ಅನುದಾನವನ್ನು ಯಾವ ಕಾಲಮಿತಿಯೊಳಗೆ ಪೂರೈಸಲಾಗುವುದು? (ಸಂಪೂರ್ಣ ಮಾಹಿತಿ ನೀಡುವುದು) | |

ಸಂಖ್ಯೆ:ಹಿಂವಕ **646** ಬಿಎಂಎಸ್ **2026**

**(ಶಿವರಾಜ ಎಸ್. ತಂಗಡಗಿ)**
ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ
ಕನ್ನಡ ಮತ್ತು ಸಂಸ್ಕೃತಿ ಸಚಿವರು